**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ ಸಿದ್ದಿ ಇವರು ನಿಯಮ 330ಎರಡಿ ನೀಡಿರುವ ಸೂಚನೆಗೆ ಮಾಹಿತಿ**

ಸೂಚನೆ:-

ಕರ್ನಾಟಕ ರಾಜ್ಯದಲ್ಲಿ ಬುಡಕಟ್ಟು ಜನಾಂಗದವರ ಮಕ್ಕಳು ಶಿಕ್ಷಣದಿಂದ ವಂಚಿತರಾಗದೆ ಎಲ್ಲಾ ಮಕ್ಕಳಿಗೂ ಶಿಕ್ಷಣ ದೊರೆಯಬೇಕು ಎಂಬ ಸದುದ್ದೇಶದಿಂದ ಪ್ರಾರಂಭವಾದ ಸಂಸ್ಥೆಯೇ ವನವಾಸಿ ಕಲ್ಯಾಣ ಕರ್ನಾಟಕ.

ವನವಾಸಿ ಕಲ್ಯಾಣ ಕರ್ನಾಟಕ ಈ ಸಂಸ್ಥೆಗೆ ಉತ್ತರ ಕನ್ನಡ ಜಿಲ್ಲೆಯ ಯಲ್ಲಾಪುರ ತಾಲ್ಲೂಕಿನ ಯಲ್ಲಾಪುರ ಹೋಬಳಿಯ ಯಲ್ಲಾಪುರ ಗ್ರಾಮದ ಸ.ನಂ. 128 ಪೈಕಿ ಕ್ಷೇತ್ರ 1 ಎಕರೆ ಜಮೀನನ್ನು ಯಲ್ಲಾಪುರದಲ್ಲಿ ನಡೆಸುತ್ತಿರುವ ಬುಡಕಟ್ಟು (ವನವಾಸಿ) ಜನಾಂಗದ ವಿದ್ಯಾರ್ಥಿ ನಿಲಯದ ಕಟ್ಟಡ ನಿರ್ಮಾಣಕ್ಕಾಗಿ ಹಿಂದಿನ ಸರ್ಕಾರ ಮಂಜೂರು ಮಾಡಿತ್ತು. ಆದರೆ ಹೊಸ ಸರ್ಕಾರ ಬಂದ ಮೇಲೆ ಸದರಿ ಆದೇಶಕ್ಕೆ ತಡೆ ನೀಡಿದೆ. ಬುಡಕಟ್ಟು ಜನಾಂಗದ ಮಕ್ಕಳು ಕಲಿಯುತ್ತಿರುವ ಶಿಕ್ಷಣ ಸಂಸ್ಥೆ ವನವಾಸಿ ಕಲ್ಯಾಣ ಕರ್ನಾಟಕಕ್ಕೆ ನೀಡಿದ್ದ ಜಮೀನಿನ ಮಂಜೂರಾತಿ ಆದೇಶಕ್ಕೆ ತಡೆ ನೀಡಿರುವ ಸರ್ಕಾರದ ಆದೇಶವನ್ನು ಈ ಕೂಡಲೇ ಹಿಂದಕ್ಕೆ ಪಡೆಯಬೇಕೆಂದು ಕೋರಿರುವ ಬಗ್ಗೆ

**ಉತ್ತರ:-**

ಬುಡಕಟ್ಟು(ವನವಾಸಿ) ಜನಾಂಗದ ಶೈಕ್ಷಣಿಕ ಹಿತದೃಷ್ಟಿಯಿಂದ ಸರ್ಕಾರಿ ಆದೇಶ ಸಂಖ್ಯೆ: ಕಂಇ 10 ಎಲ್‌ಜಿಎನ್ 2022 ದಿನಾಂಕ 13.02.2023 ರನ್ವಯ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 27 ರಲ್ಲಿ ಸರ್ಕಾರಕ್ಕೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ, ನಿಯಮ 22ಎ(2) ಅನ್ನು ಸಡಿಲಿಸಿ, ಉತ್ತರ ಕನ್ನಡ ಜಿಲ್ಲೆ, ಯಲ್ಲಾಪುರ ತಾಲ್ಲೂಕು ಯಲ್ಲಾಪುರ ಹೋಬಳಿ, ಯಲ್ಲಾಪುರ ಗ್ರಾಮದ ಸ.ನಂ. 128 ರಲ್ಲಿ 1-00 ಎಕರೆ ಜಮೀನನ್ನು ಬುಡಕಟ್ಟು (ವನವಾಸಿ) ಜನಾಂಗದ ವಿದ್ಯಾರ್ಥಿ ನಿಲಯ ನಿರ್ಮಾಣಕ್ಕಾಗಿ ಕರ್ನಾಟಕ ಭೂ ಮಂಜೂರಾತಿ ನಿಯಮಗಳು, 1969ರ ನಿಯಮ 22ಎ(1)(i)(3) ರನ್ವಯ ಪ್ರಸ್ತಾಪಿತ ಜಮೀನಿನ ಪ್ರಚಲಿತ ಕೃಷಿಯೇತರ ಮಾರ್ಗಸೂಚಿ ಮೌಲ್ಯದ ಶೇಕಡ 10 ರಷ್ಟು ಮತ್ತು ಇನ್ನಿತರೆ ಶಾಸನಬದ್ಧ ಶುಲ್ಕಗಳನ್ನು ವಿಧಿಸಿ ವನವಾಸಿ ಕಲ್ಯಾಣ ಸಂಸ್ಥೆಗೆ ಮಂಜೂರು ಮಾಡಲಾಗಿದೆ.

ಸರ್ಕಾರಿ ಜಮೀನುಗಳ ಮಂಜೂರಾತಿ ಬಗ್ಗೆ ಅನರ್ಹ ಸಂಸ್ಥೆಗಳಿಗೆ ನಿಯಮ ಮೀರಿ ಆಗಿರುವ ಜಮೀನು ಮಂಜೂರಾತಿಗಳ ಬಗ್ಗೆ ಸರ್ಕಾರಕ್ಕೆ ದೂರುಗಳು ಬಂದಿದ್ದು, ಪ್ರಚಲಿತ ನಿಯಮಗಳ ಆಧಾರದ ಮೇಲೆ ಮಂಜೂರಾತಿಯಾಗಿರುವ ಬಗ್ಗೆ ಖಾತ್ರಿ ಪಡಿಸಿಕೊಳ್ಳುವ ಪ್ರಕ್ರಿಯೆಯು ಸರ್ಕಾರದ ಪರಿಶೀಲನೆಯಲ್ಲಿದೆ. ಯಾವುದೇ ನಿರ್ದಿಷ್ಟ ಸಂಸ್ಥೆಯ ಬಗ್ಗೆ ಅಥವಾ ಅಂತಹ ಸಂಸ್ಥೆಗೆ ಮಂಜೂರಾಗಿರುವ ಜಮೀನಿನ ಬಗ್ಗೆ ಯಾವುದೇ ನಿರ್ದಿಷ್ಟ ಸೂಚನೆ ಇರುವುದಿಲ್ಲ. ಅರ್ಹತೆ, ಮಾನದಂಡ ಮತ್ತು ನಿಯಮಾವಳಿಗಳ ಆಧಾರದ ಮೇಲೆ ಅಂತಿಮ ತೀರ್ಮಾನ ಕೈಗೊಳ್ಳಲಾಗುವುದು.

**(ಕಡತ ಸಂಖ್ಯೆ: ಕಂಇ 21 ಎಲ್‌ಜಿಎನ್ 2023)**

**(ಕೃಷ್ಣ ಬೈರೇಗೌಡ)**
ಕಂದಾಯ ಸಚಿವರು